**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2019-20 ನೇ ಸಾಲಿನಲ್ಲಿ ಕಾಲೋನಿ ಅಭಿವೃದ್ಧಿ ಯೋಜನೆ/ಪ್ರಗತಿ ಕಾಲೋನಿ ಯೋಜನೆ ಅಡಿಯಲ್ಲಿ ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ, ಪರಿಶಿಷ್ಟ ಜಾತಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳಲ್ಲಿ ವಿವಿಧ ಕಾಮಗಾರಿಗಳಿಗೆ ಅನುದಾನ ಮಂಜೂರು ಮಾಡುವ ಬಗ್ಗೆ.

*******

**ಪ್ರಸ್ತಾವನೆ:**

ಪರಿಶಿಷ್ಟಜಾತಿ/ ಪರಿಶಿಷ್ಟ ವರ್ಗದ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳನ್ನು ಅಭಿವೃದ್ಧಿಪಡಿಸುವ ಕಾರ್ಯಕ್ರಮವನ್ನು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ರಡಿಯಲ್ಲಿ ನೀಡಿದ ಅನುದಾನದಿಂದ ಜಾರಿಗೊಳಿಸಲಾಗುತ್ತಿದೆ.

ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಜನರು ಇರುವ ಕಾಲೋನಿಗಳಲ್ಲಿ ಕುಡಿಯುವ ನೀರು, ರಸ್ತೆ, ವಿದ್ಯುತ್, ಒಳಚರಂಡಿ, ಸಂಪರ್ಕ ರಸ್ತೆ ಇತ್ಯಾದಿ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಸಮಗ್ರವಾಗಿ ಅಭಿವೃದ್ಧಿಪಡಿಸಲಾಗುತ್ತಿದೆ. ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳನ್ನು ಅಭಿವೃದ್ಧಿಪಡಿಸಲು ಅನುದಾನ ಮಂಜೂರು ಮಾಡಬೇಕೆಂದು ಮಾನ್ಯ ಶ್ರೀ ಎಸ್.ಟಿ. ಸೋಮಶೇಖರ್, ಮಾಜಿ ವಿಧಾನಸಭಾ ಸದಸ್ಯರು, ಯಶವಂತಪುರ ಇವರು ದಿನಾಂಕ: 27-09-2019 ರ ಪತ್ರದಲ್ಲಿ ಕೋರಿರುತ್ತಾರೆ.

ಮೇಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 202 ಎಸ್‌ಎಲ್‌ಪಿ 2019 ಬೆಂಗಳೂರು, ದಿನಾಂಕ:24-10-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ರೂ.300.00 ಲಕ್ಷ (ಮೂನ್ನೂರು ಲಕ್ಷ ರೂಪಾಯಿಗಳು ಮಾತ್ರ) ಗಳ ಅನುದಾನವನ್ನು ಮಂಜೂರು ಮಾಡಿ ಆದೇಶಿಸಿದೆ.

**ಷರತ್ತುಗಳು:**

1. ಜಿಲ್ಲಾಧಿಕಾರಿಗಳು ಮಾನ್ಯ ಮಾಜಿ ವಿಧಾನಸಭಾ ಸದಸ್ಯರು ಸೂಚಿಸುವಂತಹ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.
2. ಜಿಲ್ಲಾಧಿಕಾರಿಗಳಿಗೆ ನೀಡಿರುವ ಆರ್ಥಿಕ ಅಧಿಕಾರದ ಮಿತಿಯಲ್ಲಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಮತ್ತು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಈ ಮೂಲಕ ಅಧಿಕಾರ ನೀಡಲಾಗಿದೆ.

-----2

3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರು ನಿಗಧಿಪಡಿಸಿದ ಅನುದಾನವನ್ನು ತಕ್ಷಣವೇ ಜಿಲ್ಲಾಧಿಕಾರಿಗಳ ಜಂಟಿ ಖಾತೆಗೆ ಬಿಡುಗಡೆ ಮಾಡುವುದು. ಜಿಲ್ಲಾಧಿಕಾರಿಗಳು ಸದರಿ ಅನುದಾನವನ್ನು ಪ್ರಸಕ್ತ ಆರ್ಥಿಕ ವರ್ಷದಲ್ಲಿ ವೆಚ್ಚ ಮಾಡತಕ್ಕದ್ದು. ವೆಚ್ಚ ಮಾಡದೇ ಇದ್ದಲ್ಲಿ, ಉಳಿದ ಅನುದಾನವನ್ನು ಸರ್ಕಾರಕ್ಕೆ ಹಿಂತಿರುಗಿಸುವುದು.
4. ಕಾಮಗಾರಿಯ ಗುಣಮಟ್ಟ ಕಾಪಾಡಲು ಮೂರನೇ ಪಾರ್ಟಿಯಿಂದ ತಪಾಸಣೆ ನಡೆಸತಕ್ಕದ್ದು.
5. ಬಿಡುಗಡೆ ಮಾಡಿರುವ ಅನುದಾನಕ್ಕೆ ಕಾಮಗಾರಿ ಪೂರ್ಣಗೊಂಡ ಉಪಯೋಗಿತ ಪ್ರಮಾಣ ಪತ್ರವನ್ನು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸತಕ್ಕದ್ದು.
6. ಪರಿಶಿಷ್ಟ ಜಾತಿ ಕಾಲೋನಿಯಲ್ಲಿ ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ 1999 ರನ್ವಯ ಇ-ಪೋರ್ಟಲ್ ಮೂಲಕ ಟೆಂಡರ್ ಕರೆದು ಸದರಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವುದು.
7. ಕಾಲೋನಿಗಳಲ್ಲಿ ತೆಗೆದುಕೊಳ್ಳುವ ಕಾಮಗಾರಿಗಳನ್ನು ತಪ್ಪದೇ ಜಿಯೋ ಟ್ಯಾಗ್ಡ್ (Geo-tagged) ಮಾಡಿಸುವುದು
8. ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿಯಲ್ಲಿ ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಜಲ ಸಂಪನ್ಮೂಲ ಇಲಾಖೆಗಳಿಂದ ಸಿ.ಸಿ ರಸ್ತೆ, ಒಳಚರಂಡಿ, ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಪ್ರತ್ಯೇಕವಾಗಿ ತೆಗೆದುಕೊಳ್ಳಲಾಗುತ್ತಿರುವುದರಿಂದ ಅದೇ ಕಾಮಗಾರಿಗಳನ್ನು ಈ ಅನುದಾನದಿಂದ ತೆಗೆದುಕೊಳ್ಳಬಾರದು.

ಈ ಯೋಜನೆಗೆ ತಗಲುವ ವೆಚ್ಚವನ್ನು ಪರಿಶಿಷ್ಟ ಜಾತಿ ಜನರಿಗೆ, ಸಮಾಜ ಕಲ್ಯಾಣ ಇಲಾಖೆಯ ಲೆಕ್ಕಶೀರ್ಷಿಕೆ 4225-01-796-0-01 (ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳು) ರಡಿ ಒದಗಿಸಿದ ಅನುದಾನದಿಂದ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಸಿ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ

ಇವರಿಗೆ:-

1. ಮಹಾಲೇಖಪಾಲರು, (ಎ & ಇ ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು

3. ಜಿಲ್ಲಾಧಿಕಾರಿ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು
4. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಜಿಲ್ಲೆ.
5. ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

ಪ್ರತಿಗಳು:

1. ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3. ಸರ್ಕಾರದ ಉಪ ಕಾರ್ಯದರ್ಶಿ-1, ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು